## ಕರ್ನಾಟಕ ಸರ್ಕಾರದ ನಡವಳಗಳು

ವಿಷಯ: 2012-13ನೇ ಸಾಲಿಗೆ ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ: 1. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ:11024/21/2012-ಆರ್&ಎಂ. ದಿನಾಂಕ:21-12-2012.

2. ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು, ಇವರ ಪತ್ರ ಸಂಖ್ಯೆ: ಟಿಆರ್‌ಐ/ ಸಿಆರ್-20/2011-12, ದಿನಾಂಕ:09-01-2013.

*******

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ಪತ್ರದಲ್ಲಿ ಕೇಂದ್ರ ಸರ್ಕಾರದ ಬುಡಕಟ್ಟು ವ್ಯವಹಾರಗಳ ಮಂತ್ರಾಲಯವು 2012-13ನೇ ಸಾಲಿಗೆ ಗಿರಿಜನ ಸಂಶೋಧನಾ ಸಂಸ್ಥೆಗೆ ₹16.00 ಲಕ್ಷಗಳ ಅನುದಾನವನ್ನು ಮಂಜೂರು ಮಾಡಿದ್ದು, ಸದರಿ ಮೊತ್ತವು ದಿನಾಂಕ: 05-03-2013ರಲ್ಲಿ ರಾಜ್ಯ ಸರ್ಕಾರದ ಖಾತೆಯಲ್ಲಿ ಜಮೆಯಾಗಿರುತ್ತದೆ. ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು ಇವರು ಮೇಲೆ (2)ರಲ್ಲಿ ಓದಲಾದ ಪತ್ರದಲ್ಲಿ ಬುಡಕಟ್ಟು ವ್ಯವಹಾರಗಳ ಮಂತ್ರಾಲಯ ಮಂಜೂರು ಮಾಡಿರುವ ₹16.00 ಲಕ್ಷ ಹಾಗೂ ರಾಜ್ಯದ ಪಾಲು ₹16.00 ಒಟ್ಟು ₹32.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ತಡೆ ಪಟ್ಟಿಯೊಂದಿಗೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಕಇ 178 ಪವಯೋ 2012, ಬೆಂಗಳೂರು ದಿನಾಂಕ 26-03-2013**

2012-13ನೇ ಸಾಲಿಗೆ ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆಗೆ ಕೇಂದ್ರದ ಪಾಲು ₹16.00 ಲಕ್ಷ ಹಾಗೂ ರಾಜ್ಯದ ಪಾಲು ₹16.00 ಲಕ್ಷ ಒಟ್ಟು ₹32.00 ಲಕ್ಷ (ಮೂವತ್ತೆರಡು ಲಕ್ಷ ರೂಪಾಯಿಗಳು ಮಾತ್ರ) ಗಳ ಅನುದಾನವನ್ನು ಈ ಕೆಳಕಂಡ ಕಾರ್ಯಕ್ರಮಗಳಿಗೆ ಬಿಡುಗಡೆಗೊಳಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

(₹ಲಕ್ಷಗಳಲ್ಲಿ)

| ಕ್ರ.ಸಂ | ಕಾರ್ಯಕ್ರಮಗಳು | ಕೇಂದ್ರವಾರು | ರಾಜ್ಯವಾರು | ಒಟ್ಟು |
|---|---|---|---|---|
| 1 | ಸಂಶೋಧನೆ | 2.00 | 2.00 | 4.00 |
| 2 | ತರಬೇತಿ | 4.00 | 4.00 | 8.00 |
| 3 | ಸೆಮಿನಾರ್/ಕಾರ್ಯಾಗಾರ/ ಸಾಂಸ್ಕೃತಿಕ ಕಾರ್ಯಕ್ರಮ | 1.50 | 1.50 | 3.00 |
| 4 | ಮೌಲ್ಯಮಾಪನ | 2.50 | 2.50 | 5.00 |
| 4 | ಮ್ಯೂಸಿಯಂ / ಕರಕುಶಲ ಪರಿಕರಗಳ ಸಂಗ್ರಹ / ಸಾಕ್ಷ್ಯಚಿತ್ರಗಳ ಸಂಗ್ರಹ | 1.00 | 1.00 | 2.00 |
| 5 | ಸಾಕ್ಷ್ಯಚಿತ್ರ ನಿರ್ಮಾಣ | 2.00 | 2.00 | 4.00 |
| 6 | ಗ್ರಂಥಾಲಯಕ್ಕೆ ಪುಸ್ತಕಗಳ ಖರೀದಿ | 2.00 | 2.00 | 4.00 |
| 6 | ಲೇಖನ ಸಾಮಗ್ರಿಗಳ ಖರೀದಿ | 1.00 | 1.00 | 2.00 |
| ಒಟ್ಟು | | 16.00 | 16.00 | 32.00 |

ಈ ಸಂಬಂಧದ ವೆಚ್ಚವನ್ನು 2012-13ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ: 2225-02-001-0-02 (ಯೋಜನೆ) ಅಡಿ ಭರಿಸತಕ್ಕದ್ದು.

ಸದರಿ ಕಾರ್ಯಕ್ರಮಕ್ಕೆ ಬಿಡುಗಡೆ ಮಾಡಿದ ಮೊತ್ತಗಳನ್ನು ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು, ಇವರ ಮೇಲು ರುಜು ಪಡೆದು ಜಿಲ್ಲಾ ಖಜಾನೆ, ಮೈಸೂರು, ಇಲ್ಲಿಂದ ಡ್ರಾ ಮಾಡಿ ಭರಿಸತಕ್ಕದ್ದು

ಈ ಉದ್ದೇಶಕ್ಕಾಗಿ ಬಿಡುಗಡೆಯಾದ ಅನುದಾನವನ್ನು ಉದ್ದೇಶಿತ ಕಾರ್ಯಕ್ರಮಕ್ಕೆ ಪೂರ್ಣವಾಗಿ ಬಳಕೆ ಮಾಡಿ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಸಕಕಾ 87 ಆಂಆಸ 2013, ದಿನಾಂಕ: 21-03-2013ರಲ್ಲಿ ನೀಡಿದ ಸಹಮತಿಯ ಮೇರೆಗೆ ಹಾಗೂ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 04 ಟಿಎಫ್‌ಪಿ 2012, ದಿನಾಂಕ:27-06-2012ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದ ಮೇರೆಗೆ ಆದೇಶ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಸಮಾಜ ಕಲ್ಯಾಣ ಇಲಾಖೆ

ಇವರಿಗೆ:

1) ಮಹಾಲೇಖಪಾಲರು, (ಎ ಮತ್ತು ಇ, ಲೆಕ್ಕಪರಿಶೋಧನೆ-1 ಮತ್ತು ಲೆಕ್ಕಪರಿಶೋಧನೆ-2) ಕರ್ನಾಟಕ, ಬೆಂಗಳೂರು.
2) ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಕೃಷಿಭವನ, ಬೆಂಗಳೂರು.
3) ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ನಂ.1540, ಅನಿಕೇತನ ರಸ್ತೆ, ಕುವೆಂಪು ನಗರ, ಮೈಸೂರು.
4) ಉಪ ನಿರ್ದೇಶಕರು, ಖಜಾನೆ ಗಣಕ ಜಾಲ, ಖನಿಜಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು
5) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಮೈಸೂರು.
7) ಜಿಲ್ಲಾ ಖಜಾನಾಧಿಕಾರಿ, ಮೈಸೂರು ನಗರ.
8) ಶಾಖಾ ರಕ್ಷ ಕಡತ.
9) ಹೆಚ್ಚುವರಿ ಪ್ರತಿ-03.